**ಕರ್ನಾಟಕ ಸರಕಾರ**

ಸಂ:ಬಿಜಿಎಂ:ಡಿಯುಡಿಸಿ:ಯುಪಿಎಸಿ:ಸಿಆರ್:1:2012-13

ಜಿಲ್ಲಾಧಿಕಾರಿಗಳ ಕಾರ್ಯಾಲಯ,
ನಗರ ಬಡತನ ನಿರ್ಮೂಲನಾ ಕೋಶ,
ಬೆಳಗಾವಿ. ದಿನಾಂಕ:30.05.2012.

**ವಿಷಯ:** ಪಟ್ಟಣ ಪಂಚಾಯತ ಖಾನಾಪೂರ ವ್ಯಾಪ್ತಿಯಲ್ಲಿ 2012-13ನೇ ಸಾಲಿನ ಪಟ್ಟಣ ಪಂಚಾಯತ ಆದಾಯದಡಿ ಶೇ.7.25 ಮತ್ತು ಶೇ.3ರಡಿ ತೆಗೆದುಕೊಂಡ ಕಾರ್ಯಕ್ರಮ/ಕಾಮಗಾರಿಗಳ ಕ್ರಿಯಾ ಯೋಜನೆ ಅನುಮೋದನೆ ಕುರಿತು.

**ಓದಿತು:**-1)ಸರ್ಕಾರದ ಸುತ್ತೋಲೆ ಸಂಖ್ಯೆ: ನಅಇ:415:ಜಿಇಎಲ್:2011 ದಿನಾಂಕ:27.02.2012

2)ಆಯುಕ್ತರು, ಪೌರಾಡಳಿತ ನಿರ್ದೇಶನಾಲಯ ಬೆಂಗಳೂರು ಸುತ್ತೋಲೆಸಂ:ಪೌನಿ:22.75:ಸುತ್ತೋಲೆ:2:2012-13 ದಿನಾಂಕ:24.04.2012

3)ಮುಖ್ಯಾಧಿಕಾರಿ, ಪಟ್ಟಣ ಪಂಚಾಯತ ಖಾನಾಪೂರ ಇವರ ಪತ್ರ ಸಂಖ್ಯೆ: ಪಪಂಖಾ:ಎಸ್ಎಫ್‌ಸಿ:2012-13:61 ದಿನಾಂಕ:14.05.2012

**ಪ್ರಸ್ತಾವನೆ:**

2012-13ನೇ ಸಾಲಿಗೆ ಖಾನಾಪೂರ ಪಟ್ಟಣ ಪಂಚಾಯತಿಯು ಸರ್ಕಾರದ ಸುತ್ತೋಲೆಯ ಮಾರ್ಗಸೂಚಿಗಳನ್ವಯ ಬಾಬ್ತುಗಳನ್ನು ಹೊರತುಪಡಿಸಿ ರೂ. 25.85 ಲಕ್ಷಗಳ ಆದಾಯವನ್ನು ಹೊಂದಿರುತ್ತದೆ. ಅದರಂತೆ ಓದಿತು (3)ರನ್ವಯ ಮುಖ್ಯಾಧಿಕಾರಿ, ಪಟ್ಟಣ ಪಂಚಾಯತ ಖಾನಾಪೂರ ಇವರು ಪಟ್ಟಣ ಪಂಚಾಯತ ಆದಾಯದಲ್ಲಿ ಶೇ.7.25ರಷ್ಟು ನಗರದ ಇತರೆ ಬಡ ಜನರ ಕಲ್ಯಾಣ ಕಾರ್ಯಕ್ರಮಗಳಿಗೆ ರೂ.1.87 ಲಕ್ಷಗಳಲ್ಲಿ 02 ಕಾರ್ಯಕ್ರಮಗಳಿಗೆ ಹಾಗೂ ಶೇ.3%ರಷ್ಟು ವಿಕಲಚೇತನರ ಕಲ್ಯಾಣ ಕಾರ್ಯಕ್ರಮಗಳಿಗಾಗಿ ರೂ.0.78 ಲಕ್ಷಗಳಲ್ಲಿ 02 ಕಾರ್ಯಕ್ರಮಗಳ ಕ್ರಿಯಾ ಯೋಜನೆ ಅನುಮೋದನೆಗಾಗಿ ಸಲ್ಲಿಸಿರುತ್ತಾರೆ. ಅದರಂತೆ ಓದಿತು (1)ರ ಸರ್ಕಾರದ ಸುತ್ತೋಲೆ ಮಾರ್ಗಸೂಚಿಯಂತೆ ಪರಿಶೀಲಿಸಲಾಗಿ, ಶೇ.7.25ರಷ್ಟು ನಗರದ ಇತರೆ ಬಡಜನರ ಕಲ್ಯಾಣ ನಿಧಿಗೆ ರೂ.1.87 ಲಕ್ಷಗಳಲ್ಲಿ 02 ಕಾರ್ಯಕ್ರಮಗಳಿಗೆ ಹಾಗೂ ಶೇ.3ರಷ್ಟು ವಿಕಲಚೇತನರ ಕಲ್ಯಾಣ ಕಾರ್ಯಕ್ರಮಗಳಿಗಾಗಿ ರೂ.0.78 ಲಕ್ಷಗಳಲ್ಲಿ 02 ಕಾರ್ಯಕ್ರಮಗಳ ಕ್ರಿಯಾ ಯೋಜನೆ ಅನುಮೋದನೆಗೆ ಪ್ರಸ್ತಾಪಿಸಿದ್ದನ್ನು ಪರಿಗಣಿಸಲಾಗಿದೆ.

| ಕ್ರ.ಸಂ | ಕಾರ್ಯಕ್ರಮಗಳ ಹೆಸರು | ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ) |
|---|---|---|
| *1* | *2* | *3* |
| | **ಶೇ.7.25ರ ಇತರೆ ಬಡಜನರ ಕಲ್ಯಾಣ ಕಾರ್ಯಕ್ರಮ/ಕಾಮಗಾರಿಗಳು** | |
| | **ವ್ಯಕ್ತಿ ಸಂಬಧಿತ ಅನುಕೂಲತೆಗಳು** | |
| 1 | ಬ್ಯಾಂಕ್ ಸಾಲದ ನೆರವಿನೊಂದಿಗೆ ಸ್ವಯಂ ಉದ್ಯೋಗ ಪ್ರಾರಂಭಿಸುವ ಸಣ್ಣ ಉದ್ದಿಮೆದಾರರಿಗೆ ಸಹಾಯಧನ ನೀಡುವುದು. | 0.75 |
| | **ಸಮುದಾಯ ಸಂಬಂಧಿತ ಸೌಲಭ್ಯಗಳು** | |
| 2 | ಹೊಸ ಆಶ್ರಯ ಕಾಲೋನಿ ಹತ್ತಿರ ಕೆ.ಎಸ್.ಆರ್.ಪಿ ರೋಡ ಸಮುದಾಯ ಭವನ ಹತ್ತಿರ ಸೋಲಾರ ದೀಪ ಅಳವಡಿಸುವುದು. | 1.12 |

| | | |
|---|---|---|
| | **ಒಟ್ಟು** | **1.87** |
| | **ಶೇ.3ರ ವಿಕಲಚೇತನರ ಕಲ್ಯಾಣ ಕಾರ್ಯಕ್ರಮಗಳು** | |
| | **ವ್ಯಕ್ತಿ ಸಂಬಧಿತ ಅನುಕೂಲತೆಗಳು** | |
| 1 | ಬ್ಯಾಂಕ್ ಸಾಲದ ನೆರವಿನೊಂದಿಗೆ ಸ್ವಯಂ ಉದ್ಯೋಗ ಪ್ರಾರಂಭಿಸುವ ಸಣ್ಣ ಉದ್ದಿಮೆದಾರರಿಗೆ ಸಹಾಯಧನ ನೀಡುವುದು. | 0.31 |
| 2 | ವೈಯಕ್ತಿಕ ಶೌಚಾಲಯ ನಿರ್ಮಿಸಲು ಸಹಾಯಧನ ನೀಡುವುದು. | 0.47 |
| | **ಒಟ್ಟು** | **0.78** |

**ಆದೇಶ**

ಮೇಲಿನ ಪ್ರಸ್ತಾವನೆಯಂತೆ ಪಟ್ಟಣ ಪಂಚಾಯತ ಖಾನಾಪೂರ ವ್ಯಾಪ್ತಿಯಲ್ಲಿ 2012-13ನೇ ಸಾಲಿನ ಪಟ್ಟಣ ಪಂಚಾಯತ ಆದಾಯದಡಿ ಶೇ.7.25ರಷ್ಟು ನಗರದ ಇತರೆ ಬಡ ಜನರ ಕಲ್ಯಾಣ ಯೋಜನೆಯಡಿ ರೂ.1.87 ಲಕ್ಷಗಳಲ್ಲಿ 02 ಕಾರ್ಯಕ್ರಮಗಳಿಗೆ ಹಾಗೂ ಶೇ.3%ರಷ್ಟು ವಿಕಲಚೇತನರ ಕಲ್ಯಾಣ ಯೋಜನೆಯಡಿ ರೂ.0.78 ಲಕ್ಷಗಳಲ್ಲಿ 02 ಕಾರ್ಯಕ್ರಮಗಳನ್ನು ಕೈಕೊಳ್ಳಲು ಕ್ರಿಯಾಯೋಜನೆ ಅನುಮೋದನೆ ನೀಡಿ ಓದಿತು (1) ಹಾಗೂ (2)ರ ಸರ್ಕಾರದ ಸುತ್ತೋಲೆಯ ನಿಬಂಧನೆ ಹಾಗೂ ಷರತ್ತುಗಳಿಗೆ ಅನುಗುಣವಾಗಿ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ಆದೇಶಿಸಿದೆ.

**ಸಹಿ/-**
**(ವಿ. ಅನ್ಬುಕುಮಾರ)**
ಜಿಲ್ಲಾಧಿಕಾರಿಗಳು, ಬೆಳಗಾವಿ

**ಪ್ರತಿ:**ಗೌರವಾದರಗಳೊಂದಿಗೆ, ಆಯುಕ್ತರು ಪೌರಾಡಳಿತ ನಿರ್ದೇಶನಾಲಯ, ಬೆಂಗಳೂರು ಇವರಿಗೆ ಮಾಹಿತಿಗಾಗಿ ಸಾದರಪಡಿಸಿದೆ.
**ಪ್ರತಿ:**ಕಾರ್ಯಪಾಲಕ ಅಭಿಯಂತರರು/ ಸಹಾಯಕ ಕಾರ್ಯಪಾಲಕ ಅಭಿಯಂತರರು ಜಿಲ್ಲಾ ನಗರಾಭಿವೃದ್ಧಿ ಕೋಶ, ಜಿಲ್ಲಾಧಿಕಾರಿಗಳ ಕಾರ್ಯಾಲಯ ಬೆಳಗಾವಿ.
**ಪ್ರತಿ:**ಮುಖ್ಯಾಧಿಕಾರಿಗಳು, ಪಟ್ಟಣ ಪಂಚಾಯತ ಖಾನಾಪೂರ ಇವರಿಗೆ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.

**ಸಹಿ/-**

ಯೋಜನಾ ನಿರ್ದೇಶಕರು
ಜಿಲ್ಲಾ ನಗರಾಭಿವೃದ್ಧಿ ಕೋಶ,
ಜಿಲ್ಲಾಧಿಕಾರಿಗಳ ಕಾರ್ಯಾಲಯ ಬೆಳಗಾವಿ